**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2706
ಸದಸ್ಯರ ಹೆಸರು : ಡಾ.ಡಿ.ತಿಮ್ಮಯ್ಯ
ಉತ್ತರಿಸುವ ದಿನಾಂಕ : 25-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಮಂಜೂರಾತಿಯಾದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)</td><td>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 826 ವಸತಿ ಶಾಲೆ/ ಕಾಲೇಜುಗಳು (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156, ಹಿಂದುಳಿದವರ್ಗ-167) ಕಾರ್ಯನಿರ್ವಹಿಸುತ್ತಿವೆ. ಜಿಲ್ಲಾವಾರು ಮಾಹಿತಿ ಅನುಬಂಧ-01 ರಲ್ಲಿ ನೀಡಿದೆ.</td></tr>
<tr><td>ಆ)</td><td>ಈ ಶಾಲೆಗಳಿಗೆ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;</td><td>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ವಸತಿ ಶಾಲೆ/ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಬೋಧಕೇತರ ಹುದ್ದೆಗಳ ವಿವರಗಳು ಈ ಕೆಳಕಂಡಂತಿವೆ.<br>
<table>
<tr><th rowspan="2">ಕ್ರ.ಸಂ</th><th rowspan="2">ಹುದ್ದೆ</th><th rowspan="2">ಮಂಜೂರಾದ ಹುದ್ದೆಗಳ ಸಂಖ್ಯೆ</th><th colspan="3">ಕಾರ್ಯನಿರ್ವಹಿಸುತ್ತಿರುವ ಖಾಯಂ</th><th rowspan="2">ಖಾಲಿ ಹುದ್ದೆಗಳ ಸಂಖ್ಯೆ</th></tr>
<tr><th>ಖಾಯಂ</th><th>ಅತಿಥಿ</th><th>ಹೊ. ಸಂಪನ್ಮೂಲ</th></tr>
<tr><td>1.</td><td>ಬೋಧಕರು</td><td>8831</td><td>4724</td><td>2213</td><td>429</td><td>1465</td></tr>
<tr><td>2</td><td>ಬೋಧಕೇತರರು</td><td>2210</td><td>1077</td><td>0</td><td>1016</td><td>297</td></tr>
<tr><td>3</td><td>ಗ್ರೂಪ್-ಡಿ ವೃಂದ</td><td>7947</td><td>0</td><td>0</td><td>7867</td><td>80</td></tr>
<tr><td colspan="2">ಒಟ್ಟು</td><td>18988</td><td>5801</td><td>2213</td><td>9312</td><td>1842</td></tr>
</table>
ಗ್ರೂಪ್-ಡಿ ನೌಕರರನ್ನು ಆರ್ಥಿಕ ಇಲಾಖೆಯ ನಿರ್ದೇಶನದಂತೆ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಜಿಲ್ಲಾಹಂತದಲ್ಲಿ ನೇಮಕ ಮಾಡಿಕೊಳ್ಳಲಾಗುತ್ತಿದೆ.</td></tr>
</table>

| | | |
|---|---|---|
| ಇ) | ಖಾಲಿ ಇದ್ದಲ್ಲಿ, ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಸಂಘದ ವ್ಯಾಪ್ತಿಯ ಪದವಿ ಪೂರ್ವ ವಸತಿ ಕಾಲೇಜುಗಳಲ್ಲಿ ಖಾಲಿ ಇದ್ದ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ ಸಂಖ್ಯೆ: ಪಿಎಸ್‌ಸಿ 01 ಆರ್ ಟಿ(4)ಬಿ-3/2016 ದಿ:03.11.2016 ರಲ್ಲಿ 257 ಬೋಧಕ/ ಬೋಧಕೇತರ ಹುದ್ದೆಗಳ ಹಾಗೂ 460 ವಸತಿ ಶಾಲೆಗಳ ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಕ್ರಮವಹಿಸಲಾಗಿದ್ದು, ಈ ಪೈಕಿ ಅಂತಿಮ ಆಯ್ಕೆ ಪಟ್ಟಿ ಹೊರಡಿಸಿರುವ 193 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಲಾಗಿದೆ.<br><br>ಮುಂದುವರೆದು, ಆಯೋಗವು ಚಿತ್ರಕಲಾ ಶಿಕ್ಷಕರ ತಾತ್ಕಾಲಿಕ ಆಯ್ಕೆಯನ್ನು ಪ್ರಕಟಿಸಿದ್ದು, ಅಂತಿಮ ಆಯ್ಕೆಪಟ್ಟಿ ಪ್ರಕಟಿಸಿದ ನಂತರ ನೇಮಕಾತಿಗೆ ಮುಂದಿನ ಪ್ರಕ್ರಿಯೆ ಮಾಡಲಾಗುವುದು.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ವಸತಿ ಶಾಲೆಗಳಲ್ಲಿ ಖಾಲಿ ಇದ್ದ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ ಸಂಖ್ಯೆ: ಆರ್(2) 1084/17-18/ಪಿಎಸ್‌ಸಿ, ದಿ:23.06.2017 ರಲ್ಲಿ 3376 ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದ್ದು, ಆಯೋಗವು ವಿವಿಧ ದಿನಾಂಕಗಳಂದು 2779 ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ್ದು, ಈ ಪೈಕಿ ಈಗಾಗಲೇ 1596 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಲಾಗಿದೆ.<br><br>ಮುಂದುವರೆದು 188 ಸಮಾಜ ವಿಜ್ಞಾನ ಶಿಕ್ಷಕರ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮುಖಾಂತರ ಸ್ಥಳ ನಿಯುಕ್ತಿಗೊಳಿಸಲಾಗಿದ್ದು, ಪೂರ್ಣ ಪ್ರಮಾಣದ ನೈಜತೆ ಪ್ರಮಾಣ ಪತ್ರಗಳು ಸ್ವೀಕೃತವಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಲು ಕ್ರಮವಹಿಸಲಾಗುತ್ತಿದೆ.<br><br>ಹಿಂದಿ ಶಿಕ್ಷಕರ ನೇಮಕಾತಿಗೆ ಸಂಬಂದಿಸಿದಂತೆ 181 ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗದ ಅಭ್ಯರ್ಥಿಗಳು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ, ಪ್ರಕರಣವನ್ನು ಆಲಿಸಿದ ನ್ಯಾಯಾಲಯವು ನೇಮಕಾತಿ ಪ್ರಕ್ರಿಯೆಗೆ ತಡೆಯಾಜ್ಞೆ ಹೊರಡಿಸಿರುತ್ತದೆ. ನ್ಯಾಯಾಲಯದ ಮಧ್ಯಂತರ ಆದೇಶದಲ್ಲಿ ಅಂತಿಮ ಆಯ್ಕೆಪಟ್ಟಿಯಲ್ಲಿನ 20 ಅಭ್ಯರ್ಥಿಗಳನ್ನು ತಾತ್ಕಾಲಿಕವಾಗಿ ತಡೆಹಿಡಿದು ಉಳಿದ ಅಭ್ಯರ್ಥಿಗಳ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಲು ಆದೇಶಿಸಲಾಗಿದೆ.<br><br>ಪರಿಷ್ಕೃತ ಆಯ್ಕೆ ಪಟ್ಟಿಯನ್ನು ನೇಮಕಾತಿ ಪ್ರಾಧಿಕಾರವೇ ಅಂತಿಮಗೊಳಿಸ ಬೇಕಿರುವುದರಿಂದ ಮಾನ್ಯ ನ್ಯಾಯಾಲಯದ ಮೂಲಕ ಆಯೋಗಕ್ಕೆ ನಿರ್ದೇಶನ ನೀಡಲು ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲಾಗಿರುತ್ತದೆ. ಅಂತಿಮ ಆಯ್ಕೆ ಪಟ್ಟಿ ಸ್ವೀಕೃತವಾದ ನಂತರ ಅಭ್ಯರ್ಥಿಗಳ ನೈಜ ದಾಖಲಾತಿಗಳನ್ನು ಪರಿಶೀಲಿಸಿ, ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಕ್ರಮವಹಿಸಲಾಗುವುದು. |

ಸಕಇ 198 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2706 ಕ್ಕೆ ಅನುಬಂಧ-01 | | |
|---|---|---|
| ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾವಾರು ವಸತಿ ಶಾಲೆ/ ಕಾಲೇಜುಗಳ ವಿವರ | | |
| ಕ್ರ.ಸಂ | ಜಿಲ್ಲೆ | ಒಟ್ಟು |
| 1 | ಬಾಗಲಕೋಟೆ | 30 |
| 2 | ಬೆಳಗಾವಿ | 54 |
| 3 | ಬಳ್ಳಾರಿ | 21 |
| 4 | ಬೆಂಗಳೂರು ನಗರ | 5 |
| 5 | ಬೆಂಗಳೂರು ಗ್ರಾಮೀಣ | 12 |
| 6 | ಬೀದರ್ | 29 |
| 7 | ಚಾಮರಾಜನಗರ | 22 |
| 8 | ಚಿಕ್ಕಬಳ್ಳಾಪುರ | 22 |
| 9 | ಚಿಕ್ಕಮಗಳೂರು | 35 |
| 10 | ಚಿತ್ರದುರ್ಗ | 36 |
| 11 | ದಕ್ಷಿಣ ಕನ್ನಡ | 11 |
| 12 | ದಾವಣಗೆರೆ | 23 |
| 13 | ಧಾರವಾಡ | 15 |
| 14 | ಗದಗ | 16 |
| 15 | ಹಾಸನ | 38 |
| 16 | ಹಾವೇರಿ | 28 |
| 17 | ಕಲಬುರ್ಗಿ | 45 |
| 18 | ಕೊಡಗು | 9 |
| 19 | ಕೋಲಾರ | 26 |
| 20 | ಕೊಪ್ಪಳ | 29 |
| 21 | ಮಂಡ್ಯ | 38 |
| 22 | ಮೈಸೂರು | 37 |
| 23 | ರಾಯಚೂರು | 36 |
| 24 | ರಾಮನಗರ | 23 |
| 25 | ಶಿವಮೊಗ್ಗ | 32 |
| 26 | ತುಮಕೂರು | 53 |
| 27 | ಉಡುಪಿ | 9 |
| 28 | ಉತ್ತರ ಕನ್ನಡ | 24 |
| 29 | ವಿಜಯಪುರ | 23 |
| 30 | ಯಾದಗಿರಿ | 22 |
| 31 | ವಿಜಯನಗರ | 23 |
| | ಒಟ್ಟು | 826 |